**All India Radio: Bangalore**
**National Bulletin In Kannada**
**25.11.2025 1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಅಯೋಧ್ಯೆಯ ರಾಮಮಂದಿರದಲ್ಲಿ ಧ್ವಜಾರೋಹಣ ನೆರವೇರಿಸಿದ ಪ್ರಧಾನಿ ನರೇಂದ್ರ ಮೋದಿ
2. ನೂತನ ಕಾರ್ಮಿಕ ಸಂಹಿತೆಗಳ ಅನುಷ್ಠಾನದಿಂದ ತಗ್ಗಲಿರುವ ನಿರುದ್ಯೋಗ ದರ- ಎಸ್‌ಬಿಐ ವರದಿಯಲ್ಲಿ ಉಲ್ಲೇಖ
3. ಚಾರ್‌ಧಾಮ್ ಯಾತ್ರೆ: ಈ ವರ್ಷ ದಾಖಲೆಯ ೫೧ ಲಕ್ಷ ಯಾತ್ರಾರ್ಥಿಗಳು ಭಾಗಿ
4. ಟೆಸ್ಟ್ ಕ್ರಿಕೆಟ್: ಭಾರತದ ವಿರುದ್ಧ ದಕ್ಷಿಣ ಆಫ್ರಿಕಾ ತಂಡದಿಂದ ಸ್ಥಿರ ಪ್ರದರ್ಶನ

<><><><>

ಉತ್ತರ ಪ್ರದೇಶದ ಅಯೋಧ್ಯೆಯಲ್ಲಿರುವ ರಾಮ ಮಂದಿರದಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಅವರು, ಶುಭ ಅಭಿಜಿನ್ ಮುಹೂರ್ತದಲ್ಲಿ ಧಜ್ವಾರೋಹಣ ನೆರವೇರಿಸಿದರು. ಈ ವೇಳೆ, ಆರ್‌ಎಸ್‌ಎಸ್ ಸರಸಂಘಚಾಲಕರಾದ ಮೋಹನ್ ಭಾಗವತ್ ಉಪಸ್ಥಿತರಿದ್ದರು. ಧ್ವಜಾರೋಹಣವು ದೇವಾಲಯದ ನಿರ್ಮಾಣ ಪೂರ್ಣಗೊಂಡು ಸಾಂಸ್ಕೃತಿಕ ಆಚರಣೆ ಮತ್ತು ರಾಷ್ಟ್ರೀಯ ಏಕತೆಯ ಹೊಸ ಅಧ್ಯಾಯಕ್ಕೆ ನಾಂದಿ ಹಾಡಿತು. ಈ ಸಂದರ್ಭದಲ್ಲಿ ಕಾರ್ಯಕ್ರಮ ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮಾತನಾಡಿದರು.

ಇದಕ್ಕೂ ಮುನ್ನ ಪ್ರಧಾನ ಮಂತ್ರಿ ನರೇಂದ್ರ ಮೋದಿ ಇಂದು ಬೆಳಗ್ಗೆ ಅಯೋಧ್ಯೆಯಲ್ಲಿ ರೋಡ್ ಶೋ ನಡೆಸಿದರು. ರಸ್ತೆಯ ಇಕ್ಕೆಲಗಳಲ್ಲಿ ಸಾವಿರಾರು ಜನರು ಅವರಿಗೆ ಸ್ವಾಗತ ಕೋರಿದರು. ನಂತರ ಪ್ರಧಾನಿಯವರು ಮಹರ್ಷಿ ವಶಿಷ್ಠ, ಮಹರ್ಷಿ ವಿಶ್ವಾಮಿತ್ರ, ಮಹರ್ಷಿ ಅಗಸ್ತ್ಯ, ಮಹರ್ಷಿ ವಾಲ್ಮೀಕಿ, ದೇವಿ ಅಹಲ್ಯ, ನಿಷಾದರಾಜ ಗುಹ ಮತ್ತು ಮಾತಾ ಶಬರಿ ಅವರಿಗೆ ಸಂಬಂಧಿಸಿದ ದೇವಾಲಯಗಳನ್ನು ಹೊಂದಿರುವ ಸಪ್ತಮಂದಿರಕ್ಕೆ ಭೇಟಿ ನೀಡಿದರು. ಬಳಿಕ ಅವರು, ದೇಶದ ಅಪರೂಪದ ರಾಮ ದೇವಾಲಯಗಳಲ್ಲಿ ಒಂದಾದ ಶೇಶಾವತರ್ ಮಂದಿರಕ್ಕೆ ಭೇಟಿ ನೀಡಿದರು. ಪ್ರಧಾನಿಯವರು ಮಾತಾ ಅನ್ನಪೂರ್ಣ ಮಂದಿರಕ್ಕೂ ಭೇಟಿ ನೀಡಿ, ರಾಮ ಲಲ್ಲಾ ಗರ್ಭಗುಡಿಯಲ್ಲಿ ದರ್ಶನ ಮತ್ತು ಪೂಜೆ ಸಲ್ಲಿಸಿದರು.

<><><><>

ಗುರು ತೇಜ್ ಬಹದ್ದೂರ್ ಜಿ ಅವರ ೩೫೦ ನೇ ಶಹೀದ್ ದಿವಸ್ ಸ್ಮರಣಾರ್ಥ ವಿಶೇಷ ಕಾರ್ಯಕ್ರಮದಲ್ಲಿ ಭಾಗಿಯಾಗಲು ಪ್ರಧಾನಿ ನರೇಂದ್ರ ಮೋದಿ ಇಂದು ಸಂಜೆ ಕುರುಕ್ಷೇತ್ರಕ್ಕೆ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ, ಮೋದಿ ಅವರು ಗುರು ತೇಜ್ ಬಹದ್ದೂರ್ ಅವರ ೩೫೦ ನೇ ಶಹೀದಿ ದಿವಸ್ ಸ್ಮರಣಾರ್ಥ ವಿಶೇಷ ನಾಣ್ಯ ಮತ್ತು ಸ್ಮರಣಾರ್ಥ ಅಂಚೆಚೀಟಿ ಬಿಡುಗಡೆ ಮಾಡಲಿದ್ದಾರೆ. ಕೇಂದ್ರ ಸರ್ಕಾರವು, ಈ ವರ್ಷಪೂರ್ತಿ ಸ್ಮರಣಾರ್ಥ ವಿಶೇಷ ಕಾರ್ಯಗಳನ್ನು ಆಯೋಜಿಸುತ್ತಿದೆ. ತಮ್ಮ ಭೇಟಿಯ ಸಮಯದಲ್ಲಿ, ಪ್ರಧಾನಮಂತ್ರಿ ಅವರು ಶ್ರೀಕೃಷ್ಣನ ಪವಿತ್ರ ಶಂಖದ ಗೌರವಾರ್ಥವಾಗಿ ಹೊಸದಾಗಿ ನಿರ್ಮಿಸಲಾದ ಪಾಂಚಜನ್ಯ ಕಟ್ಟಡವನ್ನು ಉದ್ಘಾಟನೆ ಮಾಡಲಿದ್ದಾರೆ. ನಂತರ ಸಂಜೆ, ಮೋದಿ ಅವರು ಪವಿತ್ರ ಯಾತ್ರಾ ಸ್ಥಳಗಳಲ್ಲಿ ಒಂದಾದ ಬ್ರಹ್ಮ ಸರೋವರದಲ್ಲಿ ದರ್ಶನ ಮತ್ತು ಪೂಜೆಯನ್ನು ನೆರವೇರಿಸಲಿದ್ದಾರೆ. ಇದೇ ೧೫ ರಿಂದ ಡಿಸೆಂಬರ್ ೫ ರವರೆಗೆ ಕುರುಕ್ಷೇತ್ರದಲ್ಲಿ ನಡೆಯುತ್ತಿರುವ ಅಂತಾರಾಷ್ಟ್ರೀಯ ಗೀತಾ ಮಹೋತ್ಸವದ ಭಾಗವಾಗಿ ಈ ಕಾರ್ಯಕ್ರಮ ಆಯೋಜನೆ ಮಾಡಲಗಿದೆ.

<><><><>

ನೂತನ ಕಾರ್ಮಿಕ ಸಂಹಿತೆಗಳ ಅನುಷ್ಠಾನವು, ದೇಶದ ಆರ್ಥಿಕತೆಯನ್ನು ಗಮನಾರ್ಹವಾಗಿ ಉತ್ತೇಜಿಸುತ್ತದೆ ಮತ್ತು ನಿರುದ್ಯೋಗ ದರವನ್ನು ತಗ್ಗಿಸುತ್ತದೆ ಎಂದು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ವರದಿ ತಿಳಿಸಿದೆ.

ನೂತನ ಕಾರ್ಮಿಕ ಸಂಹಿತೆಗಳು ನಿರುದ್ಯೋಗ ದರವನ್ನು ಶೇಕಡಾ ೧.೩ ರಷ್ಟು ಕಡಿಮೆ ಮಾಡಬಹುದು. ಇದು ೭೫ ಲಕ್ಷ ಉದ್ಯೋಗ ಸೃಷ್ಟಿಗೆ ಕಾರಣವಾಗಲಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ. ಈ ತಿಂಗಳ ೨೧ ರಂದು ಜಾರಿಗೆ ಬಂದ ನೂತನ ಕಾರ್ಮಿಕ ಸಂಹಿತೆಗಳ ಅನುಷ್ಠಾನವು, ಕಾರ್ಮಿಕರ ಬಲವನ್ನು ಶೇಕಡಾ ೧೫ ರಷ್ಟು ಹೆಚ್ಚಿಸುತ್ತದೆ. ಪ್ರಸ್ತುತ ಕಾರ್ಮಿಕರ ಬಲ ಅಂದಾಜು ಶೇಕಡಾ ೬೦.೪ ರಷ್ಟಿದ್ದು, ಇದು ಶೇಕಡಾ ೭೫.೫ ಕ್ಕೆ ಏರಿಕೆಯಾಗಲಿದೆ. ಶೇಕಡಾ ೩೦ ರಷ್ಟು ಉಳಿತಾಯ ದರದೊಂದಿಗೆ ಸುಧಾರಣೆಗಳು ಬಳಕೆಯ ಹೆಚ್ಚಳಕ್ಕೆ ಕಾರಣವಾಗಬಹುದು. ಇದು ದೇಶದ ಆರ್ಥಿಕ ಬೆಳವಣಿಗೆಗೆ ಪ್ರಮುಖ ಉತ್ತೇಜನ ನೀಡಲಿದೆ. ದೇಶದಲ್ಲಿ ಪ್ರಸ್ತುತ ೪೪ ಕೋಟಿ ಜನರು ಅಸಂಘಟಿತ ವಲಯದಲ್ಲಿ ಕೆಲಸ ಮಾಡುತ್ತಿದ್ದಾರೆ. ಈ ಪೈಕಿ ಸುಮಾರು ೩೧ ಕೋಟಿ ಕಾರ್ಮಿಕರು ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಂಡಿದ್ದಾರೆ. ಈ ಪರಿವರ್ತನೆಯೊಂದಿಗೆ ಮುಂದಿನ ಎರಡು ಮೂರು ವರ್ಷಗಳಲ್ಲಿ ದೇಶದ ಸಾಮಾಜಿಕ ಭದ್ರತಾ ವ್ಯಾಪ್ತಿಯು ಶೇಕಡಾ ೮೦ ರಿಂದ ೮೫ ರಷ್ಟು ತಲುಪುವ ನಿರೀಕ್ಷೆಯಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ.

<><><><>

ಉತ್ತರಾಖಂಡದ ಚಮೋಲಿ ಜಿಲ್ಲೆಯಲ್ಲಿರುವ ಪವಿತ್ರ ಬದರಿನಾಥ ದೇವಾಲಯದ ದ್ವಾರಗಳನ್ನು ಚಳಿಗಾಲದ ಹಿನ್ನೆಲೆ ಇಂದು ಮಧ್ಯಾಹ್ನ ೨ ಗಂಟೆ ೫೬ ನಿಮಿಷಕ್ಕೆ ಮುಚ್ಚಲಾಗುವುದು. ಈ ಹಿನ್ನೆಲೆಯಲ್ಲಿ ದೇವಾಲಯವನ್ನು ಸುಮಾರು ೧೨ ಟನ್ ಹೂವುಗಳಿಂದ ಅಲಂಕಿರಿಸಲಾಗಿದೆ. ಕೊನೆಯ ದಿನವಾದ ಇಂದು ದೇವಾಲಯಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿದ್ದಾರೆ.  ಈ ವರ್ಷದ ಚಾರ್‌ಧಾಮ್ ಯಾತ್ರೆ, ಏಪ್ರಿಲ್ ೩೦ ರಂದು ಪ್ರಾರಂಭವಾಯಿತು. ಕೇದರಾನಾಥ, ಗಂಗೋತ್ರಿ ಮತ್ತು ಯಮುನೋತ್ರಿ ದೇವಾಲಯಗಳು ಈ ಋತುವಿಗಾಗಿ ಈಗಾಗಲೇ ಮುಚ್ಚಲಾಗಿದೆ. ಈ ವರ್ಷದ ಚಾರ್‌ಧಾಮ್ ಯಾತ್ರೆ ಹೊಸ ದಾಖಲೆಯನ್ನು ನಿರ್ಮಿಸಿದೆ. ಕಳೆದ ವರ್ಷ ೪೮ ಲಕ್ಷ ಭಕ್ತರು ಚಾರ್‌ಧಾಮ್ ಕೈಗೊಂಡಿದ್ದರು. ಈ ವರ್ಷ ದಾಖಲೆಯ ೫೧ ಲಕ್ಷ ಯಾತ್ರಾರ್ಥಿಗಳು ಚಾರ್‌ಧಾಮ್ ಯಾತ್ರೆ ಪೂರ್ಣಗೊಳಿಸಿದ್ದಾರೆ.

<><><><>

ಈ ತಿಂಗಳ ೨೧ ರ ವೇಳೆಗೆ ೩೦೬ ಲಕ್ಷ ಹೆಕ್ಟೇರ್‌ಗೂ ಹೆಚ್ಚು ಪ್ರದೇಶದಲ್ಲಿ ಹಿಂಗಾರು ಬೆಳೆಗಳನ್ನು ಬಿತ್ತನೆ ಮಾಡಲಾಗಿದೆ. ಕಳೆದ ವರ್ಷದ ಇದೇ ಅವಧಿಯಲ್ಲಿ ೬೮.೧೫ ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ಹೋಲಿಸಿದರೆ, ಈ ಬಾರಿ ೭೩.೩೬ ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ದ್ವಿದಳ ಧಾನ್ಯಗಳ ಬಿತ್ತನೆ ಮಾಡಲಾಗಿದೆ. ಶ್ರೀ ಅನ್ನ ಮತ್ತು ಧಾನ್ಯಗಳನ್ನು ೧೯.೬೯ ಲಕ್ಷ ಹೆಕ್ಟೇರ್‌ಗೂ ಹೆಚ್ಚು ಪ್ರದೇಶದಲ್ಲಿ ಬೆಳೆಸಲಾಗಿದೆ. ೭೬.೬೪ ಲಕ್ಷ ಹೆಕ್ಟೇರ್‌ಗಳಲ್ಲಿ ಎಣ್ಣೆಕಾಳುಗಳನ್ನು ಬಿತ್ತಲಾಗಿದೆ ಎಂದು ಕೃಷಿ ಸಚಿವಾಲಯ ತಿಳಿಸಿದೆ.

<><><><>

ಪಂಚಾಯತ್ ರಾಜ್ ಸಚಿವಾಲಯ ನಾಳೆ ಸಂವಿಧಾನ ದಿನದ ಸಂದರ್ಭದಲ್ಲಿ ಎಲ್ಲಾ ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳಲ್ಲಿ ರಾಷ್ಟ್ರವ್ಯಾಪಿ ಆಚರಣೆಯನ್ನು ಆಯೋಜಿಸಿದೆ.  ಹಿರಿಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಸಮ್ಮುಖದಲ್ಲಿ ಕಾರ್ಯದರ್ಶಿ ವಿವೇಕ್ ಭಾರದ್ವಾಜ್ ನೇತೃತ್ವದಲ್ಲಿ ಸಂವಿಧಾನದ ಮುನ್ನುಡಿ ಓದುವ ಮೂಲಕ ಸಂವಿಧಾನ ದಿನವನ್ನು ಆಚರಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ. ಎಲ್ಲಾ ಉದ್ಯೋಗಿಗಳಿಗೆ 'ನಿಮ್ಮ ಸಂವಿಧಾನವನ್ನು ತಿಳಿದುಕೊಳ್ಳಿ' ಎಂಬ ವಿಷಯದ ಕುರಿತು ರಸಪ್ರಶ್ನೆ ಮತ್ತು ಪ್ರಬಂಧ ಸ್ಪರ್ಧೆಗಳನ್ನು ಸಹ ಆಯೋಜಿಸಲಾಗುವುದು. ಇದೇ ವೇಳೆ, ದೇಶಾದ್ಯಂತದ ಪಂಚಾಯತ್‌ಗಳು ಸ್ಥಳೀಯ ಭಾಷೆಗಳಲ್ಲಿ ಸಂವಿಧಾನದ ಪೀಠಿಕೆಯ ಸಾಮೂಹಿಕ ವಾಚನಗಳನ್ನು ನಡೆಸುತ್ತವೆ. ಜೊತೆಗೆ ಸಾಂವಿಧಾನಿಕ ಮೌಲ್ಯಗಳ ಕುರಿತು ಚರ್ಚೆಗಳು, ವಿಚಾರ ಸಂಕಿರಣಗಳು ಮತ್ತು ರಸಪ್ರಶ್ನೆಗಳನ್ನು ನಡೆಸುತ್ತವೆ. ಈ ಸಂದರ್ಭದಲ್ಲಿ ರಾಷ್ಟ್ರವ್ಯಾಪಿ ಸಂವಿಧಾನ ಸಂಪರ್ಕ-ಮುನ್ನುಡಿ ಓದುವ ರಿಲೇಯನ್ನು ಸಹ ಆಯೋಜಿಸಲಾಗುವುದು ಎಂದು ಸಚಿವಾಲಯ ಮಾಹಿತಿ ನೀಡಿದೆ.

<><><><>

ಹೈಲಿ ಗುಬ್ಬಿ ಜ್ವಾಲಾಮುಖಿ ಸ್ಫೋಟದಿಂದ ಇಥಿಯೋಪಿಯಾದ ಪ್ರಭಾವಿತವಾದ ಪ್ರದೇಶಗಳಲ್ಲಿ ಸುರಕ್ಷತಾ ಮುನ್ನೆಚ್ಚರಿಕೆಯಾಗಿ ಏರ್ ಇಂಡಿಯಾ ಹಲವಾರು ದೇಶೀಯ ಮತ್ತು ಅಂತಾರಾಷ್ಟ್ರೀಯ ವಿಮಾನಗಳನ್ನು

ರದ್ದುಗೊಳಿಸಿದೆ. ವಿಮಾನಗಳು ಹಾರಲು ಸುರಕ್ಷಿತವಾಗಿದಿಯೇ ಎಂಬುದನ್ನು ಖಚಿತಪಡಿಸಿಕೊಳ್ಳಲು ವಿಮಾನಗಳ ವಿವರವಾದ ಪರಿಶೀಲನೆ ನಡೆಸಲಾಗುತ್ತಿದೆ. ವಿಮಾನ ನಿಲ್ದಾಣಗಳಲ್ಲಿ ಏರ್‌ಇಂಡಿಯಾ ಸಂಸ್ಥೆಯ ಪ್ರತಿನಿಧಿಗಳು, ಪ್ರಯಾಣಿಕರಿಗೆ ಬದಲಾವಣೆ ಕುರಿತು ಮಾಹಿತಿ ನೀಡುತ್ತಿವೆ. ಅಲ್ಲದೆ, ಹೋಟೆಲ್ ವಾಸ್ತವ್ಯ ಮತ್ತು ಇತರ ಸೌಲಭ್ಯದೊಂದಿಗೆ ಅವರಿಗೆ ಸಹಾಯ ಮಾಡುತ್ತಿದ್ದಾರೆ. ಸಾಧ್ಯವಾದಷ್ಟು ಬೇಗ ಪರ್ಯಾಯ ಪ್ರಯಾಣದ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಏರ್ ಇಂಡಿಯಾ ಸಂಸ್ಥೆ ತಿಳಿಸಿದೆ.

<><><><>

ಇಥಿಯೋಪಿಯಾದಲ್ಲಿ ಇತ್ತೀಚೆಗೆ ಸಂಭವಿಸಿದ ಜ್ವಾಲಾಮುಖಿ ಸ್ಫೋಟದಿಂದ ಉಂಟಾದ ಬೂದಿ ಕಣದಿಂದ ಕೂಡಿದ ಮೋಡಗಳು ಇಂದು ಸಂಜೆಯ ವೇಳೆಗೆ ಭಾರತದಿಂದ ಚೀನಾ ಕಡೆಗೆ ಚಲಿಸುವ ನಿರೀಕ್ಷೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೂದಿ ಕಣಗಳು ವಿಮಾನ ಕಾರ್ಯಾಚರಣೆಗಳ ಮೇಲೆ ಮಾತ್ರ ಪರಿಣಾಮ ಬೀರುತ್ತಿದೆ. ಆದರೆ ಹವಾಮಾನ ಅಥವಾ ಗಾಳಿಯ ಗುಣಮಟ್ಟದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಭಾರತೀಯ ಹವಾಮಾನ ಇಲಾಖೆಯ ಮಹಾನಿರ್ದೇಶಕ ಮೃತ್ಯುಂಜಯ್ ಮೊಹಾಪಾತ್ರ ತಿಳಿಸಿದ್ದಾರೆ.

<><><><>

ಗುವಾಹಟಿಯಲ್ಲಿ ನಡೆಯುತ್ತಿರುವ ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ದ್ವಿತೀಯ ಟೆಸ್ಟ್ ಕ್ರಿಕೆಟ್ ಪಂದ್ಯದ ನಾಲ್ಕನೇ ದಿನದಾಟದಲ್ಲಿ ಇಂದು ಎರಡನೇ ಇನ್ನಿಂಗ್ಸ್ ಮುಂದುವರಿಸಿರುವ ದಕ್ಷಿಣ ಆಫ್ರಿಕಾ, ಇತ್ತೀಚಿನ ವರದಿ ಬಂದಾಗ, ೪ ವಿಕೆಟ್‌ಗಳಿಗೆ ೨೦೦ ರನ್ ಮಾಡಿ ಆಡುತ್ತಿದೆ. ಇದಕ್ಕೂ ಮುನ್ನ ಮೊದಲ ಇನ್ನಿಂಗ್ಸ್‌ನಲ್ಲಿ ದಕ್ಷಿಣ ಆಫ್ರಿಕಾ ೪೮೯ ರನ್‌ಗಳಿಗೆ ಆಲ್‌ಔಟ್ ಆಗಿತ್ತು. ಭಾರತ ಮೊದಲ ಇನ್ನಿಂಗ್ಸ್‌ನಲ್ಲಿ ೨೦೧ ರನ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ಹಿನ್ನಡೆ ಅನುಭವಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾ ಮುಕ್ತಾಯವಾಯಿತು <><>